# Akashvani : Bangalore
# Regional Bulletin In Kannada
# 26.12.2025 : 14.30hrs
# ಆಕಾಶವಾಣಿ ಬೆಂಗಳೂರು
# ಪ್ರದೇಶ ಸಮಾಚಾರ

**ಮುಖ್ಯಾಂಶಗಳು :**

1. ರಾಜ್ಯದ ಎಲ್ಲಾ ರೈಲು ನಿಲ್ದಾಣಗಳಲ್ಲಿ ಮೂಲಸೌಕರ್ಯ ಅಭಿವೃದ್ಧಿಗೆ ಹೆಚ್ಚಿನ ಆದ್ಯತೆ - ಕೇಂದ್ರ ಸಚಿವ ವಿ. ಸೋಮಣ್ಣ
2. ಮೈಸೂರಿನಲ್ಲಿ ಸಿಲಿಂಡರ್ ಸ್ಫೋಟ ಪ್ರಕರಣ; ವರದಿ ನೀಡಲು ಗೃಹ ಸಚಿವರ ಸೂಚನೆ
3. ಚಿಕ್ಕಬಳ್ಳಾಪುರ ರಸ್ತೆ ಅಪಘಾತ; ನಾಲ್ವರ ಸಾವು; ಮೃತರ ಕುಟುಂಬಕ್ಕೆ ಮುಖ್ಯಮಂತ್ರಿ ಪರಿಹಾರ ಘೋಷಣೆ
4. ಕೆಜಿಎಫ್‌ನಲ್ಲಿ ರೈಲ್ವೆ ಕೋಚಿಂಗ್ ಸರ್ವೀಸಿಂಗ್ ಘಟಕ ಸ್ಥಾಪನೆ; ಬಿಜಿಎಂಎಲ್‌ಗೆ ಸೇರಿದ ಭೂಮಿ ಬಳಕೆಗೆ ಪ್ರಸ್ತಾವನೆ

******

ಕೇಂದ್ರ ರೈಲ್ವೆ ಮತ್ತು ಜಲಶಕ್ತಿ ಖಾತೆಯ ರಾಜ್ಯ ಸಚಿವ ವಿ. ಸೋಮಣ್ಣ ಇಂದು ಬೆಂಗಳೂರು ದಕ್ಷಿಣ ಜಿಲ್ಲೆಯ ಬಿಡದಿಯ ರೈಲ್ವೆ ನಿಲ್ದಾಣ ಹಾಗೂ ರಾಮನಗರ ರೈಲ್ವೆ ನಿಲ್ದಾಣಗಳಿಗೆ ಭೇಟಿ ನೀಡಿ ಅಮೃತ ಭಾರತ್ ನಿಲ್ದಾಣ ಕಾಮಗಾರಿಗಳ ಪರಿಶೀಲನೆ ನಡೆಸಿದರು. ನಂತರ ಸುದ್ದಿಗಾರರೊಂದಿಗೆ ಮಾತನಾಡಿದ ಸಚಿವರು, ರಾಜ್ಯದ ಪ್ರತಿಯೊಂದು ರೈಲು ನಿಲ್ದಾಣಗಳಲ್ಲಿ ಮೂಲಸೌಕರ್ಯಗಳ ಅಭಿವೃದ್ಧಿಗೆ ಹೆಚ್ಚಿನ ಆದ್ಯತೆ ನೀಡಲಾಗುತ್ತಿದೆ. ರಾಮನಗರ ಜಿಲ್ಲಾ ಕೇಂದ್ರದಲ್ಲಿ ಕೆಲವು ರೈಲುಗಳಿಗೆ ನಿಲುಗಡೆ ಕಲ್ಪಿಸುವಂತೆ ಸಾರ್ವಜನಿಕರು ಮತ್ತು ಸಂಸದರು ಮನವಿ ಮಾಡಿದ್ದಾರೆ ಮುಂದಿನ ದಿನಗಳಲ್ಲಿ ಇದಕ್ಕೆ ಸಂಬಂಧಿಸಿದಂತೆ ಕ್ರಮ ವಹಿಸಲಾಗುವುದು ಎಂದರು.ಬಿಡದಿ ಬೆಂಗಳೂರಿಗೆ ಸಮೀಪದಲ್ಲಿದ್ದು, ಮೂಲ ಸೌಕರ್ಯ ಅಭಿವೃದ್ಧಿಗೆ ರಾಜ್ಯ ಸರ್ಕಾರ ಹೆಚ್ಚಿನ ಗಮನ ನೀಡಿದಲ್ಲಿ ಹೆಚ್ಚಿನ ಕೈಗಾರಿಕೆಗಳು ಸ್ಥಾಪನೆಯಾಗುತ್ತವೆ. ಕೇಂದ್ರ ಸರ್ಕಾರ ರೈಲು ನಿಲ್ದಾಣದ ಅಭಿವೃದ್ಧಿಗೆ ಆದ್ಯತೆ ನೀಡಲಿದೆ ಎಂದರು. ಸಂಸದ ಡಾ. ಸಿ.ಎನ್. ಮಂಜುನಾಥ್, ಶಾಸಕ ಎಚ್.ಸಿ.ಬಾಲಕೃಷ್ಣ, ಮಾಜಿ ಶಾಸಕ ಎ.ಮಂಜುನಾಥ್, ಜಿಲ್ಲಾಧಿಕಾರಿ ಯಶವಂತ್ ವಿ. ಗುರುಕರ್ ಮತ್ತಿತರರು ಉಪಸ್ಥಿತರಿದ್ದರು.

**********

ಮೈಸೂರು ಅರಮನೆ ಮುಂಭಾಗವಿರುವ ಜಯ ಮಾರ್ತಾಂಡ ಗೇಟ್ ಬಳಿ ನಿನ್ನೆ ರಾತ್ರಿ ಸಂಭವಿಸಿದ ಹೀಲಿಯಂ ಸಿಲಿಂಡರ್ ಸ್ಫೋಟದಿಂದ ಬಲೂನ್ ಮಾರುತ್ತಿದ್ದ ಯುವಕ ಸ್ಥಳದಲ್ಲೇ ಸಾವನ್ನಪ್ಪಿದ್ದಾರೆ. ಘಟನೆಯಲ್ಲಿ ನಾಲ್ವರು ಗಾಯಗೊಂಡಿದ್ದು, ಅವರನ್ನು ನಗರದ ಕೆ.ಆರ್. ಆಸ್ಪತ್ರೆಗೆ ದಾಖಲಿಸಲಾಗಿದೆ. ಗಾಯಾಳುಗಳಲ್ಲಿ ಒಬ್ಬರ ಸ್ಥಿತಿ ಗಂಭೀರವಾಗಿದ್ದು, ಉಳಿದ ಮೂವರಿಗೆ ಸಣ್ಣ ಪ್ರಮಾಣದ ಗಾಯಗಳಾಗಿವೆ ಎಂದು ತಿಳಿದುಬಂದಿದೆ.

ಮೈಸೂರು ನಗರ ಪೊಲೀಸ್ ಆಯುಕ್ತರಾದ ಸೀಮಾ ಲಾಟ್ಕರ್ ಹಾಗೂ ಅಧಿಕಾರಿಗಳು ಸ್ಥಳಕ್ಕೆ ಭೇಟಿ ನೀಡಿ ಪರಿಶೀಲನೆ ನಡೆಸಿದ್ದಾರೆ. ಪ್ರಕರಣದ ಕುರಿತು ಪೊಲೀಸರು ತನಿಖೆ ಕೈಗೊಂಡಿದ್ದು, ಸ್ಫೋಟಕ್ಕೆ ನಿಖರ ಕಾರಣ ಪತ್ತೆ ಹಚ್ಚುವ ಕಾರ್ಯ ಮುಂದುವರಿದಿದೆ. ಈ ಮಧ್ಯೆ, ಗಾಯಾಳುಗಳು ಚಿಕಿತ್ಸೆ ಪಡೆಯುತ್ತಿರುವ ಕೆ.ಆರ್. ಆಸ್ಪತ್ರೆಗೆ ಜಿಲ್ಲಾ ಉಸ್ತುವಾರಿ ಸಚಿವ ಡಾ. ಎಚ್.ಸಿ. ಮಹದೇವಪ್ಪ ಭೇಟಿ ನೀಡಿ, ಅವರ ಆರೋಗ್ಯ ವಿಚಾರಿಸಿದರು.

**********

ಮೈಸೂರು ಅರಮನೆ ದ್ವಾರದ ಮುಂಭಾಗದಲ್ಲಿ ನಿನ್ನೆ ಸಂಭವಿಸಿದ ಹೀಲಿಯಂ ಸಿಲಿಂಡರ್ ಸ್ಫೋಟ ಪ್ರಕರಣಕ್ಕೆ ಸಂಬಂಧಿಸಿದಂತೆ ತನಿಖೆ ನಡೆಸಿ, ವರದಿ ನೀಡುವಂತೆ ಅಧಿಕಾರಿಗಳಿಗೆ ಸೂಚಿಸಲಾಗಿದೆ ಎಂದು ಗೃಹ ಸಚಿವ ಡಾ. ಜಿ. ಪರಮೇಶ್ವರ್ ಹೇಳಿದ್ದಾರೆ. ಗೃಹ ಕಚೇರಿ ಬಳಿ ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ಘಟನೆಯಲ್ಲಿ ಬಲೂನ್ ಮಾರುತ್ತಿದ್ದ ಉತ್ತರ ಪ್ರದೇಶದ ಲಖನೌ ಮೂಲದ ವ್ಯಕ್ತಿ ಮೃತಪಟ್ಟಿದ್ದಾನೆ ಎನ್ನಲಾಗಿದೆ. ಪ್ರವಾಸೋದ್ಯಮ ಇಲಾಖೆಯ ಅಧಿಕಾರಿಗಳೊಂದಿಗೆ ಚರ್ಚಿಸಿ, ಅಗತ್ಯ ಕ್ರಮ ಕೈಗೊಳ್ಳುವಂತೆ ಸೂಚನೆ ನೀಡಲಾಗಿದೆ ಎಂದರು. ಬಲೂನ್ ವ್ಯಾಪಾರಿಗೆ ಹೀಲಿಯಂ ಸಿಲಿಂಡರ್ ಹೇಗೆ ಸಿಕ್ಕಿದೆ, ಎಲ್ಲಿ ಖರೀದಿಸಿದ ಎಂಬುದನ್ನು ತನಿಖೆ ಮಾಡಿ, ವರದಿ ಸಲ್ಲಿಸುವಂತೆ ಅಧಿಕಾರಿಗಳಿಗೆ ಸೂಚಿಸಿರುವುದಾಗಿ ಅವರು ಹೇಳಿದರು.

**********

ಟಿಪ್ಪರ್ ಮತ್ತು ದ್ವಿಚಕ್ರ ವಾಹನಗಳ ನಡುವೆ ಸಂಭವಿಸಿದ ರಸ್ತೆ ಅಪಘಾತದಲ್ಲಿ ನಾಲ್ವರು ಯುವಕರು ಸ್ಥಳದಲ್ಲೇ ಸಾವನ್ನಪ್ಪಿರುವ ಘಟನೆ ಚಿಕ್ಕಬಳ್ಳಾಪುರ ತಾಲೂಕಿನ ಅಜ್ಜವಾರ ಗೇಟ್ ಬಳಿ ನಿನ್ನೆ ರಾತ್ರಿ ನಡೆದಿದೆ. ಮೃತರನ್ನು ಅಜ್ಜವಾರ ಗ್ರಾಮದ ಕಾರ್ಮಿಕರು ಎಂದು ಗುರುತಿಸಲಾಗಿದೆ. ಮೃತರ ನಿಧನಕ್ಕೆ ಮುಖ್ಯಮಂತ್ರಿ ಸಿದ್ದರಾಮಯ್ಯ ಸಂತಾಪ ಸೂಚಿಸಿದ್ದು, ಅವರ ಕುಟುಂಬಕ್ಕೆ ತಲಾ ೫ ಲಕ್ಷ ರೂಪಾಯಿ ಪರಿಹಾರ ಘೋಷಿಸಿದ್ದಾರೆ.

**********

ನವದೆಹಲಿಯಲ್ಲಿ ಇತ್ತೀಚಿಗೆ ನಡೆದ ನದಿ ಜೋಡಣೆಯ ವಿಶೇಷ ಸಮಿತಿ ಸಭೆಯಲ್ಲಿ ವರದಾ ಮತ್ತು ಬೇಡ್ತಿ ನದಿ ಜೋಡಣೆ ವಿಷಯ ಚರ್ಚೆಯಾಗಿರುವುದು ಹೊಸ ಆಶಾಭಾವನೆ ಮೂಡಿಸಿದೆ ಎಂದು ಹಾನಗಲ್ ಶಾಸಕ ಶ್ರೀನಿವಾಸ ಮಾನೆ ತಿಳಿಸಿದ್ದಾರೆ. ಹಾವೇರಿ ಜಿಲ್ಲೆ ಹಾನಗಲ್‌ನಲ್ಲಿಂದು ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ಬೇಡ್ತಿ ಹಾಗೂ ವರದಾ ನದಿಗಳ ಜೋಡಣೆಯಿಂದ ೧೮.೫ ಟಿಎಂಸಿ ಅಡಿ ನೀರು ಬಳಸಿಕೊಳ್ಳಲು ಅವಕಾಶವಿದೆ. ಈಗಾಗಲೇ ನದಿಗಳ ಜೋಡಣೆಗೆ ವಿಸ್ತೃತ ಯೋಜನಾ ವರದಿ ಸಿದ್ಧಪಡಿಸಲು ರಾಜ್ಯ ಸರ್ಕಾರ ಅನುಮತಿ ನೀಡಿದೆ ಎಂದರು. ಯೋಜನೆಗೆ ರಾಜ್ಯ ಸರ್ಕಾರ ಒಂದು ಸಾವಿರ ಕೋಟಿ ರೂಪಾಯಿ ನೀಡಲು ಮುಂದಾಗುವ ಮೂಲಕ ಸಮುದ್ರಕ್ಕೆ ವ್ಯರ್ಥವಾಗಿ ಹರಿದು ಹೋಗುತ್ತಿರುವ ನೀರನ್ನು ಜನರ ಮತ್ತು ನೀರಾವರಿ ಅನುಕೂಲಕ್ಕೆ ಬಳಸುವ ಉದ್ದೇಶ ಹೊಂದಲಾಗಿದೆ ಎಂದರು. ಇದರಿಂದ ಪಶ್ಚಿಮಕ್ಕೆ ಹರಿಯುವ ನದಿಗಳಿಂದ ರಾಜ್ಯದ ಪೂರ್ವ ಭಾಗಕ್ಕೆ ನೀರು ಹರಿಸಲು ನೆರವಾಗಲಿದೆ. ಹಾವೇರಿ ಮಾತ್ರವಲ್ಲದೇ ಗದಗ, ಕೊಪ್ಪಳ, ರಾಯಚೂರು ಜಿಲ್ಲೆಗಳಿಗೂ ಯೋಜನೆಯ ಲಾಭ ಸಿಗಲಿದೆ ಎಂದು ತಿಳಿಸಿದರು. ರಾಜ್ಯ ಸರ್ಕಾರ ಈ ಯೋಜನೆಗೆ ಸಂಪೂರ್ಣ ಬೆಂಬಲ ನೀಡಲಿದೆ. ಬೇಡ್ತಿ ನದಿ ನೀರು ಹಾವೇರಿ ಜಿಲ್ಲೆಯ ಜೀವನದಿ ವರದಾ ನದಿಗೆ ಸೇರುವುದರಿಂದ ಈ ಭಾಗದ ನೀರಾವರಿ ಯೋಜನೆಗಳಿಗೂ ಇನ್ನಷ್ಟು ಶಕ್ತಿ ಬರಲಿದೆ ಎಂದರು.

**********

ಕೋಲಾರ ಜಿಲ್ಲೆಯ ಕೆಜಿಎಫ್ ನಗರದಲ್ಲಿ ರೈಲ್ವೆ ಕೋಚ್ ಸರ್ವೀಸಿಂಗ್ ಘಟಕ ಸ್ಥಾಪಿಸಲು ಭಾರತ್ ಚಿನ್ನದ ಗಣಿ ಕಂಪನಿಗೆ ಸೇರಿದ ೫೦೦ ಎಕರೆ ಜಾಗ ಬಳಸಿಕೊಳ್ಳಲು ಕೇಂದ್ರ ಸರ್ಕಾರಕ್ಕೆ ಪ್ರಸ್ತಾವನೆ ಸಲ್ಲಿಸಿದೆ ಎಂದು ಸಂಸದ ಎಂ.ಮಲ್ಲೇಶ್ ಬಾಬು ತಿಳಿಸಿದ್ದಾರೆ. ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ಜಿಲ್ಲೆಯಲ್ಲಿ ಕ್ರಾಸಿಂಗ್ ಲೆವೆಲ್‌ಗಳಲ್ಲಿ ಮೇಲ್ಸೇತುವೆ ನಿರ್ಮಾಣಕ್ಕೆ ರೈಲ್ವೆ ಇಲಾಖೆ ಸ್ಪಂದಿಸಿದ್ದು, ಐದು ಕಡೆ ಮೇಲ್ಸೇತುವೆ ಕಾಮಗಾರಿ ನಿರ್ಮಾಣಕ್ಕೆ ಅನುಮತಿ ದೊರೆತಿದೆ ಎಂದರು. ಕೋಲಾರದಿಂದ ಬೆಂಗಳೂರಿಗೆ ನೇರ ರೈಲು ಮಾರ್ಗ ನಿರ್ಮಾಣ ತಮ್ಮ ಕನಸಾಗಿದ್ದು, ಇದಕ್ಕೆ ಸಚಿವರಿಂದ ಸೂಕ್ತ ಸ್ಪಂದನೆ ಸಿಕ್ಕಿದೆ. ರಾಜ್ಯ ಸರ್ಕಾರ ಜಮೀನು ನೀಡಿದ ಕೂಡಲೇ ಕಾಮಗಾರಿ ಆರಂಭಿಸಲು ಕ್ರಮವಹಿಸಲಾಗುವುದು ಎಂದರು.

**********

ಬೆಂಗಳೂರಿನ ಅರಮನೆ ಮೈದಾನದಲ್ಲಿ ೨ನೇ ಆಯುರ್ವೇದ ವಿಶ್ವ ಸಮ್ಮೇಳನಕ್ಕೆ ನಿನ್ನೆ ಚಾಲನೆ ದೊರೆಯಿತು. ಆಯುಷ್ ಸಚಿವಾಲಯ ಹಾಗೂ ರಾಜ್ಯ ಆಯುಷ್ ಇಲಾಖೆಯ ಸಹಯೋಗದಲ್ಲಿ ಕಜೆ ಆಯುರ್ವೇದಿಕ್ ಚಾರಿಟಬಲ್ ಫೌಂಡೇಷನ್ ನಾಲ್ಕು ದಿನಗಳ ಸಮ್ಮೇಳನ ಆಯೋಜಿಸಲಾಗಿದೆ. ರಾಜ್ಯಸಭೆ ಸದಸ್ಯ ಹಾಗೂ ಧರ್ಮಸ್ಥಳದ ಧರ್ಮಾಧಿಕಾರಿ ಡಾ. ವೀರೇಂದ್ರ ಹೆಗ್ಗಡೆ ಮಾತನಾಡಿ, ಆಯುರ್ವೇದ ಚಿಕಿತ್ಸೆ ನೀಡುತ್ತಿರುವವರು ಮತ್ತು ಇದರಲ್ಲಿ ಅಧ್ಯಯನ ಮಾಡುತ್ತಿರುವವರು ಹಿಂಜರಿಯುವ ಅಗತ್ಯವಿಲ್ಲ. ಪ್ರಸ್ತುತ ಆಯುರ್ವೇದ ಚಿಕಿತ್ಸಾ ಪದ್ಧತಿಗೆ ಜಾಗತಿಕ ಮಟ್ಟದಲ್ಲಿ ಮನ್ನಣೆ ದೊರೆಯುತ್ತಿದ್ದು, ಈ ಕ್ಷೇತ್ರದಲ್ಲಿ ಹೆಚ್ಚಿನ ಸಂಶೋಧನೆ ಆಗಬೇಕಿದೆ ಎಂದರು. ಸಚಿವ ದಿನೇಶ್ ಗುಂಡೂರಾವ್ ಮಾತನಾಡಿ, ಬದಲಾದ ಜೀವನ ಶೈಲಿನಿಂದ ಕ್ಯಾನ್ಸರ್, ಹೃದ್ರೋಗದಂತಹ ರೋಗಗಳು ಹೆಚ್ಚುತ್ತಿವೆ. ಆರೋಗ್ಯಕರ ಜೀವನಕ್ಕೆ ಆಯುರ್ವೇದ ಸಹಕಾರಿ, ರೋಗ ಬರದಂತೆ ಮುನ್ನೆಚ್ಚರಿಕೆ ವಹಿಸಲು ಯೋಗ ಮತ್ತು ಆಯುರ್ವೇದ ಸಹಕಾರಿ ಎಂದರು.

**********

ಇಂದು ಮಾಜಿ ಪ್ರಧಾನಿ ಡಾ.ಮನಮೋಹನ್ ಸಿಂಗ್ ಅವರ ಪುಣ್ಯ ಸ್ಮರಣೆ ಹಿನ್ನೆಲೆಯಲ್ಲಿ ಅವರನ್ನು ಮುಖ್ಯಮಂತ್ರಿ ಸಿದ್ದರಾಮಯ್ಯ ಸ್ಮರಿಸಿದ್ದಾರೆ. ಅನಿಶ್ಚಿತ ರಾಜಕೀಯದಿಂದಾಗಿ ಕುಂಟುತ್ತಾ ಸಾಗಿದ್ದ ದೇಶದ ಆರ್ಥಿಕತೆಗೆ ಹೊಸ ಆರ್ಥಿಕ ನೀತಿಯ ಮೂಲಕ ಚೈತನ್ಯವನ್ನು ತುಂಬಿ ಭಾರತವನ್ನು ಅಭಿವೃದ್ಧಿಯ ಪಥದಲ್ಲಿ ಮುನ್ನಡೆಸಿದ್ದವರು ಡಾ. ಮನಮೋಹನ್ ಸಿಂಗ್ ಎಂದು ಹೇಳಿದ್ದಾರೆ. ಯುಪಿಎ ಅಧಿಕಾರಾವಧಿಯಲ್ಲಿ ಪ್ರಧಾನಿಯಾಗಿ ಡಾ. ಮನಮೋಹನ್ ಸಿಂಗ್ ಅನುಷ್ಠಾನಕ್ಕೆ ತಂದಿರುವ ಮನ್ರೇಗಾ ಯೋಜನೆ, ಶಿಕ್ಷಣ ಮತ್ತು ಮಾಹಿತಿ ಹಕ್ಕಿನ ಕಾನೂನುಗಳು, ರೈತರ ಬ್ಯಾಂಕ್ ಸಾಲ ಮನ್ನಾ ಮತ್ತು ಆಧಾರ್ ಗುರುತಿನ ಚೀಟಿಯ ಜಾರಿಗಾಗಿ ಅವರು ಕೈಗೊಂಡಿದ್ದ ದಿಟ್ಟ ನಿರ್ಧಾರಗಳು ಅವರ ಜನಪರ ಕಾಳಜಿ ಮತ್ತು ದೂರದೃಷ್ಟಿಗೆ ಸಾಕ್ಷಿಯಾಗಿವೆ ಎಂದು ಮುಖ್ಯಮಂತ್ರಿ ಸ್ಮರಿಸಿದ್ದಾರೆ.

**********

ಭಾರತದ ವಿಶಿಷ್ಟ ಗುರುತಿನ ಪ್ರಾಧಿಕಾರ - ಯುಐಡಿಐಎ ವತಿಯಿಂದ ದಕ್ಷಿಣ ಕನ್ನಡ ಜಿಲ್ಲಾ ಪ್ರಾದೇಶಿಕ ಆಧಾರ್ ಸೇವಾ ಕೇಂದ್ರ ಇಂದು ಮಂಗಳೂರಿನ ಪಂಪ್‌ವೆಲ್ ಬಳಿ ಉದ್ಘಾಟನೆಗೊಂಡಿತು. ಈ ವೇಳೆ ಮಾತನಾಡಿದ ಯುಐಡಿಎಐ ರಾಜ್ಯ ಉಪ ನಿರ್ದೇಶಕ, ಗುಲ್ಶಾನ್ ಕುಮಾರ್ ಸಿಂಗ್, ಆಧಾರ್‌ಗೆ ಸಂಬಂಧಿತ ಎಲ್ಲಾ ಸೇವೆಗಳು ಈ ಕೇಂದ್ರದಲ್ಲಿ ಲಭ್ಯವಿದ್ದು, ಗ್ರಾಹಕರು ಇದರ ಪ್ರಯೋಜನ ಪಡೆದುಕೊಳ್ಳಬಹುದು ಎಂದರು. ಆಧಾರ್ ನೋಂದಣಿ, ಮಕ್ಕಳ ಬಯೋಮೆಟ್ರಿಕ್, ಹೆಸರು ಬದಲಾವಣೆ, ವಿಳಾಸ ಬದಲಾವಣೆ, ಮೊಬೈಲ್ ನಂಬರ್ ಬದಲಾವಣೆ ಸೇರಿದಂತೆ ಎಲ್ಲಾ ಸೇವೆಗಳನ್ನು ನೀಡಲಾಗುತ್ತಿದೆ. ಸರಕಾರಿ ರಜಾ ದಿನಗಳನ್ನು ಹೊರತುಪಡಿಸಿ ವಾರದ ಏಳು ದಿನವೂ ಈ ಕೇಂದ್ರ ಕಾರ್ಯನಿರ್ವಹಿಸಲಿದೆ ಎಂದು ತಿಳಿಸಿದರು.

**********

ಡಾ.ಮನಮೋಹನ್ ಸಿಂಗ್ ವಿಶ್ವವಿದ್ಯಾನಿಲಯದ ನೂತನ ಪ್ರಸಾರಾಂಗದ ಉದ್ಘಾಟನೆ ಮತ್ತು ವಿಶ್ವಮಾನವ ದಿನಾಚರಣೆಯ ಕಾರ್ಯಕ್ರಮ ಇದೇ ೨೯ರಂದು ಸೋಮವಾರ ಸೆಂಟ್ರಲ್ ಕಾಲೇಜಿನ ಜ್ಞಾನಜ್ಯೋತಿ ಸಭಾಂಗಣದಲ್ಲಿ ನಡೆಯಲಿದೆ. ಕರ್ನಾಟಕ ಜಾನಪದ ಪರಿಷತ್ತಿನ ಅಧ್ಯಕ್ಷರು ಹಾಗೂ ಹಂಪಿ ಕನ್ನಡ ವಿಶ್ವವಿದ್ಯಾಲಯದ ವಿಶ್ರಾಂತ ಕುಲಪತಿ ಪ್ರೊಫೆಸರ್ ಹಿ.ಚಿ. ಬೋರಲಿಂಗಯ್ಯ ಸಮಾರಂಭವನ್ನು ಉದ್ಘಾಟಿಸಲಿದ್ದು, ಹಿರಿಯ ರಂಗಕರ್ಮಿ ಹಾಗೂ ವಿಧಾನಪರಿಷತ್ ಸದಸ್ಯರಾದ ಡಾ. ಉಮಾಶ್ರೀ ಮುಖ್ಯ ಅತಿಥಿಗಳಾಗಿ ಪಾಲ್ಗೊಳ್ಳಲಿದ್ದಾರೆ ಎಂದು ಪ್ರಕಟಣೆ ತಿಳಿಸಿದೆ.

**********

ಮಡಿಕೇರಿ ಬಳಿಯ ಮೂರ್ನಾಡಿನಲ್ಲಿ ಇಂದಿನಿಂದ ಕೊಡವ ಕೌಟುಂಬಿಕ ಚಾಂಪಿಯನ್ಸ್ ಟ್ರೋಫಿ ಹಾಕಿ ಪಂದ್ಯಾವಳಿ ಆಯೋಜಿತವಾಗಿದೆ. ಕೊಡವ ಕೌಟುಂಬಿಕ ಹಾಕಿ ಪಂದ್ಯಾವಳಿಯಲ್ಲಿ ಚಾಂಪಿಯನ್ ಮತ್ತು ರನ್ನರ್ಸ್ ತಂಡಗಳ ನಡುವೆ ಪಂದ್ಯಾವಳಿ ನಡೆಯಲಿದೆ. ಕೊಡವ ಹಾಕಿ ಅಕಾಡೆಮಿ ವತಿಯಿಂದ ಈ ಪಂದ್ಯಾವಳಿ ಆಯೋಜಿತವಾಗಿದ್ದು, ಕೊಡವರ ೧೩ ತಂಡಗಳ ನಡುವಿನ ಪಂದ್ಯಾವಳಿಯು ಡಿಸೆಂಬರ್ ೩೦ ರವರೆಗೆ ನಡೆಯಲಿದೆ. ವಿಜೇತ ಕುಟುಂಬ ತಂಡಕ್ಕೆ ೨ ಲಕ್ಷ ರುಪಾಯಿ, ದ್ವಿತೀಯ ಸ್ಥಾನ ಪಡೆದ ತಂಡಕ್ಕೆ ೧ ಲಕ್ಷ ರುಪಾಯಿ ನಗದು ಬಹುಮಾನ ನೀಡಲಾಗುತ್ತಿದೆ ಎಂದು ಕೊಡವ ಹಾಕಿ ಅಕಾಡೆಮಿಯ ಅಧ್ಯಕ್ಷ ಪಿ. ಬೋಪಣ್ಣ ಮಾಹಿತಿ ನೀಡಿದ್ದಾರೆ.

******END****